# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 162 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 02.03.2020 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ವಿದ್ಯಾರ್ಥಿಗಳ ಉತ್ತಮ ವ್ಯಾಸಂಗದ ಹಿತದೃಷ್ಟಿಯಿಂದ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವಂತೆ ಹಾಗೂ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ರಾಜ್ಯದಲ್ಲಿ ಎಷ್ಟು ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಿ ಸ್ವಂತ ಕಟ್ಟಡಕ್ಕೆ ಅನುದಾನ ಬಿಡುಗಡೆಗೊಳಿಸಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2438 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಇದುವರೆವಿಗೂ ಒಟ್ಟು 1325 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲಾಗಿದೆ. ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ ಕಳೆದ 5 ವರ್ಷಗಳಿಂದ ಒದಗಿಸಿರುವ ಅನುದಾನದ ವಿವರಗಳು ಕೆಳಕಂಡಂತಿವೆ. |

ರೂ.ಕೋಟಿಗಳಲ್ಲಿ

| ಕ್ರ.ಸಂ | ವರ್ಷ | ಮೊತ್ತ |
|---|---|---|
| 1) | 2015–16 | 45.00 |
| 2) | 2016–17 | 143.50 |
| 3) | 2017–18 | 278.90 |
| 4) | 2018–19 | 280.00 |
| 5) | 2019–20 | 331.68 |

ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸುವ ಅನುದಾನದ ಲಭ್ಯತೆ ಹಾಗೂ ನಿವೇಶನಗಳ ಲಭ್ಯತೆಗೆ ಅನುಗುಣವಾಗಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ. ಪ್ರಸ್ತುತ 277 ವಿದ್ಯಾರ್ಥಿನಿಲಯ ಕಟ್ಟಡಗಳು ನಿರ್ಮಾಣದ ಹಂತದಲ್ಲಿದ್ದು ಸಂಪೂರ್ಣ ಮಾಹಿತಿಯು www.backwardclasses.kar.nic.in ರಲ್ಲಿ ಲಭ್ಯವಿರುತ್ತದೆ.

ಸಂಖ್ಯೆ:ಹಿಂವಕ 132 ಬಿಎಂಎಸ್ 2020

(ಶ್ರೀರಾಮುಲು)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ